ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ:ಎ.ಡಿ.ಎಂ.2(2)ಚ.ಚಿತ್ರ /22/2018-19 ದಿನಾಂಕ: 01-01-2019

**ಸುತ್ತೋಲೆ**

**ವಿಷಯ:** ಸರ್ಕಾರಿ ಶಾಲೆಗಳಲ್ಲಿ ಚಲನಚಿತ್ರಗಳ ಪ್ರದರ್ಶನಕ್ಕೆ ಅನುಮತಿ ನೀಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪತ್ರ ಸಂಖ್ಯೆ:ಇಡಿ 145ಯೋಯೋಕ 2018 ದಿನಾಂಕ:09-10-2018

******

ಸರ್ಕಾರಿ ಶಾಲೆಗಳಲ್ಲಿ ವಿವಿಧ ಚಿತ್ರ ನಿರ್ಮಾಣ ಸಂಸ್ಥೆಯವರು ನಿರ್ಮಿಸಿರುವ ಚಲನಚಿತ್ರವನ್ನು ರಿಯಾಯಿತಿ ದರದಲ್ಲಿ ಪ್ರದರ್ಶಿಸಲು ಅನುಮತಿ ಕೋರಿ ಪ್ರಸ್ತಾವನೆಗಳು ಸಲ್ಲಿಕೆಯಾಗುತ್ತಿವೆ ಮತ್ತು ನಕಲಿ ಅನುಮತಿ ಪತ್ರಗಳನ್ನು ಪಡೆದು ಶಾಲೆಗಳ ಮುಖ್ಯಸ್ಥರಿಗೆ ತೋರಿಸಿ ಒತ್ತಾಯವಾಗಿ ಮಕ್ಕಳಿಗೆ ಚಲನಚಿತ್ರ ಪ್ರದರ್ಶಿಸಲು ಮುಂದಾಗುತ್ತಿರುವುದನ್ನು ಗಮನಿಸಲಾಗಿದೆ.

ಉಪನಿರ್ದೇಶಕರು ತಮ್ಮ ಹಂತದಲ್ಲಿ ಸ್ವೀಕೃತಗೊಂಡ ಪ್ರಸ್ತಾವನೆಗಳನ್ನು ಪರಿಗಣಿಸಿ ತಾವೇ ಅನುಮತಿ ನೀಡುತ್ತಿರುವುದನ್ನು ಸಹ ಗಮನಿಸಲಾಗಿದೆ. ಉಪನಿರ್ದೇಶಕರುಗಳಿಂದ ಪಡೆದ ಅನುಮತಿ ಪತ್ರಗಳನ್ನು ಅನುಬಂಧಿಸಿ ಚಿತ್ರ ನಿರ್ಮಾಣ ಸಂಸ್ಥೆಯವರು ಪ್ರದರ್ಶನಕ್ಕೆ ಅನುಮತಿ ನೀಡುವಂತೆ ಈ ಕಛೇರಿಗೆ ಪ್ರಸ್ತಾವನೆಗಳನ್ನು ಸಲ್ಲಿಸುತ್ತಿದ್ದಾರೆ. ಇದು ಇಲಾಖೆಗೆ ಮುಜುಗರ ಉಂಟು ಮಾಡುವ ಪ್ರಸಂಗವಾಗಿದೆ.

ಉಪನಿರ್ದೇಶಕರು ಜವಾಬ್ದಾರಿಯುತ ಸ್ಥಾನದಲ್ಲಿದ್ದು, ಮಕ್ಕಳ ಶೈಕ್ಷಣಿಕ ಹಿತದೃಷ್ಟಿ ಮತ್ತು ಪೋಷಕರ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಕಾರ್ಯ ನಿರ್ವಹಿಸಬೇಕಾಗಿದೆ. ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಬಹುಪಾಲು ಮಕ್ಕಳು ಆರ್ಥಿಕವಾಗಿ ಹಿಂದುಳಿದಿರುತ್ತಾರೆ. ಈ ಹಿನ್ನೆಲೆಯಲ್ಲಿ ಸರ್ಕಾರವು ಹಲವಾರು ಉಚಿತ ಪ್ರೋತ್ಸಾಹದಾಯಕ ಯೋಜನೆಗಳನ್ನು ಜಾರಿಗೊಳಿಸಿದೆ. ಆದಾಗ್ಯೂ ರಿಯಾಯಿತಿ ದರ ನಿಗದಿಪಡಿಸಿ ಒತ್ತಾಯ ಪೂರ್ವಕವಾಗಿ ಶುಲ್ಕ ವಸೂಲಿ ಮಾಡಿ ಚಲನಚಿತ್ರ ಪ್ರದರ್ಶನಕ್ಕೆ ಅನುಮತಿ ನೀಡುವುದು ಸೂಕ್ತವಲ್ಲ. ಆದುದರಿಂದ ಇಂತಹ ಪ್ರಸ್ತಾವನೆಗಳು ಬಂದಲ್ಲಿ ಮಕ್ಕಳ ಸುರಕ್ಷತೆ/ಶೈಕ್ಷಣಿಕ ದೃಷ್ಟಿ ಮತ್ತು ಪೋಷಕರ ಆರ್ಥಿಕ ಪರಿಸ್ಥಿತಿ ಈ ಎಲ್ಲಾ ಹಿನ್ನೆಲೆಗಳಲ್ಲಿ ಯಾವುದೇ ಚಲನಚಿತ್ರ ಪ್ರದರ್ಶನಕ್ಕೆ ಅವಕಾಶ ನೀಡಬಾರದೆಂದು ಸೂಚಿಸಿದೆ.

ತಮ್ಮ ನಂಬುಗೆಯ

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ

ಇವರಿಗೆ:

1. ರಾಜ್ಯದ ಎಲ್ಲಾ ಉಪನಿರ್ದೇಶಕರುಗಳಿಗೆ ರವಾನಿಸುತ್ತಾ, ಸದರಿ ಪತ್ರವನ್ನು ನಿಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ.
2. ಕಛೇರಿ ಪತ್ರ